1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

ಸಿ.ಸಿ.ಸಂಖ್ಯೆ:1287/2021

ಪಿರ್ಯಾದಿ : ಬಿಳಿಗೆರೆ ಪೋಲಿಸರು

ವಿರುದ್ಧ

ಆರೋಪಿತರು :

1. ಕುಮಾರ **ಬಿನ್ ಲೇಟ್** ಪುಟ್ಟಯ್ಯ 37 ವರ್ಷ
2. ಉಮೇಶ **ಬಿನ್ ಲೇಟ್** ಪುಟ್ಟಯ್ಯ 41 ವರ್ಷ
3. ಪ್ರಕಾಶ ಉ.ಕಂಠಿ **ಬಿನ್ ಲೇಟ್** ಪುಟ್ಟಯ್ಯ 41 ವರ್ಷ
4. ಶಂಕರ ಬಿನ್ ರಂಗಯ್ಯ 38 ವರ್ಷ
5. ರೇಣು ಕುಮಾರ್ **ಬಿನ್ ಲೇಟ್** ಮರಯ್ಯ 41 ವರ್ಷ

ಆರೋಪಿತರ ವಾಸ:ಬಿಳುಗಲಿ ಗ್ರಾಮ, ನಂಜನಗೂಡು ತಾಲ್ಲೂಕು

**ದೋಷಾರೋಪಣೆ**

ಶ್ರೀಮತಿ.ಸರಿತಾ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., *1* ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆ**:-**

ದಿನಾಂಕ 12.04.2021 ರಂದು ಬೆಳಿಗ್ಗೆ 10.30 ಗಂಟೆ ಸಮಯದಲ್ಲಿ ನಂಜನಗೂಡು ತಾಲ್ಲೂಕು ಬಿಳಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಯ ಬಿಳುಗಲಿ ಗ್ರಾಮದ ಚಾಸಾ.1 ರವರ ಮನೆಯ ಮುಂದೆ ಹಾದು ಹೋಗಿರುವ ಕಾಂಕ್ರಿಟ್ ರಸ್ತೆಯಲ್ಲಿ ಚಾಸಾ. 1 ರವರು ನಿಂತಿರುವಾಗ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಏಕೋದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡ ಕಾರಣ, ಭಾರತ ದಂಡ ಸಂಹಿತೆಯ ಕಲಂ 143 ಸಹವಾಚಕ 149 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಎರಡನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಏಕೋದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಕೂಗಾಡಿಕೊಂಡು ದಾಂದಲೆ ಮಾಡಿದ ಕಾರಣ, ಭಾರತ ದಂಡ ಸಂಹಿತೆಯ ಕಲಂ 147 ಸಹವಾಚಕ 149 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಮೂರನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಏಕೋದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಚಾಸಾ.1 ರವರನ್ನು ಈ ದಿವಸ ಬೆಳಿಗ್ಗೆ 09.30 ಗಂಟೆ ಸಮಯದಲ್ಲಿ ಅಂಬೇಡ್ಕರ್ ಸಮುಧಾಯ ಭವನದಲ್ಲಿ ನಡೆಯುತ್ತಿದ್ದ ನ್ಯಾಯ ಪಂಚಾಯ್ತಿಯಲ್ಲಿ ನಿನ್ನ ಗಂಡ ರಾಜಪ್ಪ ಮತ್ತು ನಿನ್ನ ಮಗ ಪ್ರೀತಂ ಇಬ್ಬರೂ ನನ್ನ ಮೇಲೆ ಗ್ರಾಮದ ಮುಖಂಡರ ಸಮ್ಮುಖದಲ್ಲಿ ಹಲ್ಲೆ ಮಾಡಿರುತ್ತಾರೆ ನಾನು ಇವರಿಬ್ಬರನ್ನು ಯಾವುದೇ ಕಾರಣಕ್ಕು ಬಿಡುವುದಿಲ್ಲ, ಇವರಿಬ್ಬರನ್ನು ಕೊಂದು ಜೈಲಿಗೆ ಹೋಗುತ್ತೇನೆಂದು ಕೂಗಾಡುತ್ತಿದ್ದು, ಇದಕ್ಕೆ ಚಾಸಾ. 1 ರವರು ಪಂಚಾಯ್ತಿಯಲ್ಲಿ ಆದ ಗಲಾಟೆಯ ಬಗ್ಗೆ, ನಾನು ನಿನ್ನ ಬಳಿ ಕ್ಷಮೇ ಕೇಳುತ್ತೇನೆ ದಯವಿಟ್ಟು ನಮ್ಮ ಮನೆಯವರಿಗೆ ಏನೂ ತೊಂದರೆ ಮಾಡಬೇಡ ಎಂದು ಕೇಳುತ್ತಿದ್ದಾಗ, ಆರೋಪಿತರಾದ ನೀವು ಚಾಸಾ.1 ರವರ ಸೀರೆಯನ್ನು ಹಿಡಿದು ಎಳೆದಾಡಿ ಅವರಿಗೆ ಅವಮಾನ ಮಾಡುವ ಉದ್ದೇಶದಿಂದ ಅವರ ಮೇಲೆ ಅಪರಾಧಿಕ ಬಲಪ್ರಯೋಗ ಮಾಡಿರುತ್ತೀರಿ.

ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ.354 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ನಾಲ್ಕನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಏಕೋದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಬಂದು , ಆ ಪೈಕಿ 1ನೇ ಆರೋಪಿತರಾದ ನೀವು ಚಾಸಾ.1 ರವರ ಬಲ ತೋಳಿಗೆ ಕೈ ಯಿಂದ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.323 ಸಹವಾಚಕ ಕಲಂ.149 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಐದನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಏಕೋದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಬಂದು , ಆರೋಪಿತರಾದ ನೀವು ಚಾಸಾ.1 ರವರ ಮಗ ಮತ್ತು ಗಂಡನಿಗೆ ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆಯನ್ನು ಎಸಗಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ.506 ಸಹವಾಚಕ ಕಲಂ.149 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಕೊನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಏಕೋದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಬಂದು, ಆರೋಪಿತರಾದ

ನೀವು ಚಾಸಾ.1 ರವರ ಸೀರೆಯನ್ನು ಹಿಡಿದು ಎಳೆದಾಡಿ ಆಕೆಗೆ ಸಾರ್ವಜನಿಕ ರಸ್ತೆಯಲ್ಲಿ ಅವಮಾನ ಮಾಡಿ ಮಹಿಳೆಯ ಘನತೆಗೆ ಕುಂದುಂಟು ಮಾಡಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ.509 ಸಹವಾಚಕ ಕಲಂ.149 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

(ಮೇಲ್ಕಂಡ ಆರೋಪವನ್ನು ಆರೋಪಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 12.11.2025 ರಂದು ತೆಗೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ನಂಜನಗೂಡು

1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

ಸಿ.ಸಿ.ಸಂಖ್ಯೆ:1287/2021

ಪಿರ್ಯಾದಿ : ಬಿಳಿಗೆರೆ ಪೋಲಿಸರು

ವಿರುದ್ಧ

ಆರೋಪಿತರು :

1. ಕುಮಾರ ಬಿನ್ ಲೇಟ್ ಪುಟ್ಟಯ್ಯ 37 ವರ್ಷ
2. ಉಮೇಶ ಬಿನ್ ಲೇಟ್ ಪುಟ್ಟಯ್ಯ 41 ವರ್ಷ
3. ಪ್ರಕಾಶ ಉ.ಕಂಠಿ ಬಿನ್ ಲೇಟ್ ಪುಟ್ಟಯ್ಯ 41 ವರ್ಷ
4. ಶಂಕರ ಬಿನ್ ರಂಗಯ್ಯ 38 ವರ್ಷ
5. ರೇಣು ಕುಮಾರ್ ಬಿನ್ ಲೇಟ್ ಮರಯ್ಯ 41 ವರ್ಷ

ಆರೋಪಿತರ ವಾಸ:ಬಿಳುಗಲಿ ಗ್ರಾಮ, ನಂಜನಗೂಡು ತಾಲ್ಲೂಕು

: ಆಪಾದನೆ :

ಪ್ರಶ್ನೆ:1– ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ಆಪಾದನೆಯನ್ನು ಅರ್ಥಮಾಡಿಕೊಂಡಿರುವಿರಾ?

1 ನೇ ಆರೋಪಿ ಉತ್ತರ:

2 ನೇ ಆರೋಪಿ ಉತ್ತರ:

3 ನೇ ಆರೋಪಿ ಉತ್ತರ:

4 ನೇ ಆರೋಪಿ ಉತ್ತರ:

5 ನೇ ಆರೋಪಿ ಉತ್ತರ:

ಪ್ರಶ್ನೆ:2– ಸದರಿ ಆಪಾದನೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ನೇ ಆರೋಪಿ ಉತ್ತರ:

2 ನೇ ಆರೋಪಿ ಉತ್ತರ:

3 ನೇ ಆರೋಪಿ ಉತ್ತರ:

4 ನೇ ಆರೋಪಿ ಉತ್ತರ:

**5 ನೇ ಆರೋಪಿ ಉತ್ತರಃ**

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
**ನಂಜನಗೂಡು**